# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳು 2023-24ನೇ ಸಾಲಿಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ರ ಪ್ರಕರಣ 59ರಡಿ ಸಂಯೋಜನಾ ಪ್ರಸ್ತಾವನೆಗಳನ್ನು UUCMS (**Unified University & College Management System**) ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಸರ್ಕಾರಕ್ಕೆ ಸಲ್ಲಿಸುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 34 ಇಜಿಒವಿ 2020 (ಭಾಗ-2), ದಿನಾಂಕ: 26.04.2022.

**ಪ್ರಸ್ತಾವನೆ:-**

ಮೇಲೆ ಓದಲಾದ ಆದೇಶದಲ್ಲಿ 2022-23ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಸಂಯೋಜನೆ, ಹೊಸ ಕೋರ್ಸ್ ಪ್ರಾರಂಭ, ಸಂಯೋಜನೆ ಮುಂದುವರಿಕೆ, ಖಾಯಂ ಸಂಯೋಜನೆ ಇತ್ಯಾದಿಗಳ ಬಗ್ಗೆ ರಾಷ್ಟ್ರೀಯ ಮಾಹಿತಿ ಸಂಸ್ಥೆ (ಎನ್.ಐ.ಸಿ) ಮುಖಾಂತರವೇ ಆನ್‌ಲೈನ್ ಸಂಯೋಜನಾ ತಂತ್ರಾಂಶದ ಅರ್ಜಿಗಳನ್ನು ರಾಷ್ಟ್ರೀಯ ಶಿಕ್ಷಣ ನೀತಿ 2020ರಂತೆ ವಿಶ್ವವಿದ್ಯಾನಿಲಯಗಳು ಆಹ್ವಾನಿಸಿ, ವಿಶ್ವವಿದ್ಯಾಲಯವು ನೇಮಿಸುವ ಸ್ಥಳೀಯ ವಿಚಾರಣಾ ಸಮಿತಿಯು ಪರಾಮರ್ಶಿಸಿ, ಸಮಿತಿಯ ಶಿಫಾರಸ್ಸನ್ನು ಆನ್‌ಲೈನ್ ಮುಖಾಂತರವೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿ ನಂತರ ವಿಶ್ವವಿದ್ಯಾಲಯಗಳು ತನ್ನ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಂಯೋಜನಾ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಆದೇಶಿಸಲಾಗಿರುತ್ತದೆ.

ಪ್ರಸ್ತುತ, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳ ಕಾಲೇಜುಗಳ ಸಂಯೋಜನೆ ಪ್ರಕ್ರಿಯೆ ಕಾರ್ಯಚಟುವಟಿಕೆಗಳಿಗೆ ಅನುಮೋದನೆ ನೀಡುವುದು ಸೇರಿದಂತೆ 2023-24ನೇ ಶೈಕ್ಷಣಿಕ ವರ್ಷವನ್ನೊಳಗೊಂಡಂತೆ ಮುಂಬರುವ ಶೈಕ್ಷಣಿಕ ವರ್ಷಗಳಲ್ಲಿ ಕಡ್ಡಾಯವಾಗಿ, ಉನ್ನತ ಶಿಕ್ಷಣ ಇಲಾಖೆಯು ಅಭಿವೃದ್ಧಿಪಡಿಸಿರುವ UUCMS ತಂತ್ರಾಂಶವನ್ನು ಬಳಸಿಕೊಂಡು ಆನ್‌ಲೈನ್ ಸಂಯೋಜನಾ ತಂತ್ರಾಂಶದ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಿ, ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳೊಂದಿಗೆ, ಶಿಫಾರಸ್ಸುಗಳನ್ನು ಸರ್ಕಾರಕ್ಕೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಪ್ರಕರಣ 59(10) ರನ್ವಯ ಅನುಮೋದನೆಗೆ ಸಲ್ಲಿಸಬೇಕಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, 2023-24ನೇ ಶೈಕ್ಷಣಿಕ ಸಾಲಿಗೆ ಸಂಬಂಧಿಸಿದಂತೆ, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳ ಕಾಲೇಜುಗಳ ಸಂಯೋಜನೆ ಪ್ರಕ್ರಿಯೆಗಳಾದ Opening new colleges, Extension of existing affiliation, Continuation of affiliation, Permanent affiliation, Change/Addition of subject, Division of faculty, Increase of intake, Change of name, Change of place, Closure and withdrawal of a college, Local inquiry committee formation and Transfer of management ಮುಂತಾದ ಕಾರ್ಯಚಟುವಟಿಕೆಗಳಿಗೆ ಸರ್ಕಾರದಿಂದ ಅನುಮೋದನೆ ನೀಡುವುದು ಸೇರಿದಂತೆ, ಉನ್ನತ ಶಿಕ್ಷಣ ಇಲಾಖೆಯು ಅಭಿವೃದ್ಧಿಪಡಿಸಿರುವ UUCMS ತಂತ್ರಾಂಶವನ್ನು ಅಳವಡಿಸಿಕೊಂಡು, ಸದರಿ ತಂತ್ರಾಂಶದ ಮುಖಾಂತರವೇ ಆನ್‌ಲೈನ್ ಸಂಯೋಜನಾ ಅರ್ಜಿಗಳನ್ನು ರಾಷ್ಟ್ರೀಯ ಶಿಕ್ಷಣ ನೀತಿ-2020ರಂತೆ ಆಹ್ವಾನಿಸಬೇಕಾಗಿರುತ್ತದೆ.

ಮುಂದುವರೆದು, ಈ ರೀತಿ ಭರ್ತಿ ಮಾಡಿರುವ ಅರ್ಜಿಗಳನ್ನು ವಿಶ್ವವಿದ್ಯಾಲಯವು ನೇಮಿಸುವ ಸ್ಥಳೀಯ ವಿಚಾರಣಾ ಸಮಿತಿಯು ಪರಾಮರ್ಶಿಸಿ, ಸಮಿತಿಯ ಶಿಫಾರಸ್ಸನ್ನು ಆನ್‌ಲೈನ್ ಮುಖಾಂತರವೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿ, ವಿಶ್ವವಿದ್ಯಾಲಯವು ತನ್ನ ಶಿಫಾರಸ್ಸಿನೊಂದಿಗೆ ಅಂತಿಮ ಆದೇಶಕ್ಕಾಗಿ ಸರ್ಕಾರಕ್ಕೆ ಸಂಯೋಜನಾ ಪ್ರಸ್ತಾವನೆಯನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಕುರಿತು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂ. ಇಡಿ 47 ಯುಎನ್‌ಇ 2023, ಬೆಂಗಳೂರು, ದಿನಾಂಕ:05.04.2023.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2023-24ನೇ ಶೈಕ್ಷಣಿಕ ಸಾಲಿಗೆ ಉನ್ನತ ಶಿಕ್ಷಣ ಇಲಾಖೆಯು ಅಭಿವೃದ್ಧಿಪಡಿಸಿರುವ UUCMS ತಂತ್ರಾಂಶದ ಮುಖಾಂತರವೇ ಆನ್‌ಲೈನ್ ಸಂಯೋಜನಾ ತಂತ್ರಾಂಶದ ಅರ್ಜಿಗಳನ್ನು ರಾಷ್ಟ್ರೀಯ ಶಿಕ್ಷಣ ನೀತಿ-2020ರಂತೆ ಆಹ್ವಾನಿಸಲು, ಉನ್ನತ ಶಿಕ್ಷಣ ಇಲಾಖೆಯಡಿಯ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಕಾಲೇಜುಗಳ ಸಂಯೋಜನಾ ಪ್ರಕ್ರಿಯೆಗಳಾದ Opening new colleges, Extension of existing affiliation, Continuation of affiliation, Permanent affiliation, Change/Addition of subject, Division of faculty, Increase of intake, Change of name, Change of place, Closure and withdrawal of a college, Local inquiry committee formation and Transfer of management ಸಂಬಂಧಿಸಿದ ವಿವರಗಳನ್ನು ಆನ್‌ಲೈನ್ ಅರ್ಜಿಗಳಲ್ಲಿ ಭರ್ತಿ ಮಾಡಿ, ವಿಶ್ವವಿದ್ಯಾಲಯವು ನೇಮಿಸುವ ಸ್ಥಳೀಯ ವಿಚಾರಣಾ ಸಮಿತಿಯು ಪರಾಮರ್ಶಿಸಿ, ಸಮಿತಿಯ ಶಿಫಾರಸ್ಸನ್ನು ಆನ್‌ಲೈನ್ ಮುಖಾಂತರವೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿ ನಂತರ ವಿಶ್ವವಿದ್ಯಾಲಯವು ತನ್ನ ಶಿಫಾರಸ್ಸಿನೊಂದಿಗೆ ವಿವಿಧ ಸಂಯೋಜನೆಗೆ ಸಂಬಂಧಿಸಿದ ಶುಲ್ಕಗಳನ್ನು ತಂತ್ರಾಂಶದಲ್ಲಿ ನಿಗದಿಪಡಿಸಿ ಸರ್ಕಾರಕ್ಕೆ ದಿನಾಂಕ: 30-04-2023 ರೊಳಗಾಗಿ ಸಂಯೋಜನಾ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಆದೇಶಿಸಿದೆ.

ಸಂಯೋಜನೆಗೆ ಪೂರಕವಾದ ಎಲ್ಲಾ ಅವಶ್ಯಕ ದಾಖಲೆಗಳನ್ನು PDF ಮಾದರಿಯಲ್ಲಿಯೇ UUCMS ತಂತ್ರಾಂಶದಲ್ಲಿ ಅಪ್ ಲೋಡ್ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

**ಇವರಿಗೆ:**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-1.
2. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
3. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.

4. ಕುಲಸಚಿವರುಗಳು, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
5. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
6. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಗಾಂಧಿನಗರ, ಬೆಂಗಳೂರು.
7. ಮಾನ್ಯ ರಾಜ್ಯಪಾಲರ ಆಪ್ತ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
8. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
9. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)/ (ಇಐಆರ್ಎಸ್ಎ)/(ಎ&ಇ), ಕರ್ನಾಟಕ ಬೆಂಗಳೂರು-560 001.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು), ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ(ಕಾಲೇಜು)/(ತಾಂತ್ರಿಕ ಮತ್ತು ಯೋಜನೆ ಶಾಖೆ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ, ವಿಶ್ವವಿದ್ಯಾಲಯ-2.
14. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ, ಇವರಿಗೆ (ಉನ್ನತ ಶಿಕ್ಷಣ ಇಲಾಖೆ ಜಾಲತಾಣದಲ್ಲಿ ಪ್ರಕಟಿಸಲು)
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 384 ಯುಎನ್‌ಇ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 18.02.2022.

## ಸುತ್ತೋಲೆ

ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿನ ಹೊಸ ಕಾಲೇಜುಗಳ / ಹೊಸ ಕೋರ್ಸುಗಳ / ಪ್ರವೇಶ ಸಂಖ್ಯೆಯ ಹೆಚ್ಚಳ / ಸಂಯೋಜನೆ ಮುಂದುವರಿಕೆ/ ನವೀಕರಣ / ಸ್ಥಳ ಬದಲಾವಣೆ ಇತ್ಯಾದಿಗಳಿಗೆ ಸಂಬಂಧಿಸಿದಂತೆ, ಯುಜಿಸಿ ರೆಗ್ಯುಲೇಷನ್‌ಗಳಲ್ಲಿ ಆಯಾ ಕಾಲೇಜುಗಳು ಹೊಂದಿರಬೇಕಾದ ಕನಿಷ್ಠ ಜಮೀನಿನ ಅರ್ಹತೆಗಳ ಬಗ್ಗೆ ಕೆಲವು ಬದಲಾವಣೆಗಳು ಅಗತ್ಯವೆಂದು ಪರಿಗಣಿಸಿ, ಹೊಸ ಕಾಲೇಜುಗಳ / ಹೊಸ ಕೋರ್ಸುಗಳ / ಪ್ರವೇಶ ಸಂಖ್ಯೆಯ ಹೆಚ್ಚಳ / ಸಂಯೋಜನೆ ಮುಂದುವರಿಕೆ/ ನವೀಕರಣ / ಸ್ಥಳ ಬದಲಾವಣೆ ಇತ್ಯಾದಿಗಳ ಬಗ್ಗೆ ಸರ್ಕಾರದ ಸಹಮತಿಗಾಗಿ ವಿಶ್ವವಿದ್ಯಾಲಯಗಳು ಕಳುಹಿಸುವ ಪ್ರಸ್ತಾವನೆಗಳಲ್ಲಿ ಆಯಾ ಸಂಸ್ಥೆ ಕಾಲೇಜುಗಳು ಹೊಂದಿರಬೇಕಾದ ಕನಿಷ್ಠ ವಿಸ್ತೀರ್ಣದ ಜಮೀನಿನ ಮಿತಿಯನ್ನು ಕೆಳಗಿನಂತೆ ಪರಿಷ್ಕರಿಸಿ, ಸೂಕ್ತ ಮಾನದಂಡಗಳನ್ನು ಅನುಸರಿಸಲು ಸೂಚಿಸಿದೆ.

**ಮಾನದಂಡಗಳು:-**

1. The college/institution shall hold undisputed ownership and possession of land free from any or all encumbrances, measuring.

   a. Not less than 0.5 acres if it is located in mega cities.
   b. 1 acre if it is located in BMRDA, city corporations and district head quarters.
   c. 1.5 acres if it is located in Municipalities or taluk head quarters.
   d. 3 acres if it is any other rural areas.

   Provided that these requirements shall not apply to colleges already affiliated to the university prior to the date of notification of UGC. (Affiliation of colleges by the universities) Regulations 2009 and its amendments in 2012, **only if the existing programmes and intake of students are not altered.**

2. The registered society/trust in justified exceptional cases may be allowed to start the college for the 1st year of the programs in a readily available building, provided the institute should have the required land at the place proposed to establish the college on a permanent basis as per para 1 above.

3. In the bond to be executed by the registered society/trust it shall be mentioned that after the college is affiliated, the same will not be shifted to different location or will not be transferred to a different society, Trust, Individual or a group of individuals without the prior approval of the University, provided in the new place proposed for shifting the college, the minimum land required under para 1 above shall be ensured.

ಸದರಿ ಜಮೀನು ಆಯಾ ಸಂಸ್ಥೆ ಅಥವಾ ಕಾಲೇಜಿನ ಹೆಸರಿನಲ್ಲಿದೆಯೇ ಎಂಬುವಕ್ಕೆ ಕೆಳಕಂಡ ದಾಖಲಾತಿಗಳನ್ನು ಕಳುಹಿಸತಕ್ಕದ್ದು:-

1. ಸದರಿ ಜಮೀನಿನ ಪಹಣಿ ಅಥವಾ ಮುನಿಸಿಪಾಲಿಟಿ/ಕಾರ್ಪೋರೇಷನ್ ಗಳಿಂದ ಪಡೆದ ಇತ್ತೀಚಿನ ಖಾತಾ ನಕಲು

**ಅಥವಾ**

ಸದರಿ ಜಮೀನನ್ನು ಸಂಸ್ಥೆಯ/ಕಾಲೇಜಿನ ಹೆಸರಿಗೆ ಪಡೆದುಕೊಂಡಿರುವ ಬಗ್ಗೆ ಸಬ್ ರಿಜಿಸ್ಟ್ರಾರ್ ಕಛೇರಿಯಲ್ಲಿ ನೊಂದಾಯಿತವಾಗಿರುವ (ಎ) ಕ್ರಯಪತ್ರ ಅಥವಾ (ಬಿ) 30 ವರ್ಷಗಳಿಂದ ಕಡಿಮೆ ಇಲ್ಲದ ಅವಧಿಯ ಲೀಸ್‌ಡೀಡ್ ಅಥವಾ (ಸಿ) ದಾನಪತ್ರ.

ಹೊಸ ಕಾಲೇಜುಗಳ ಸ್ಥಾಪನೆ, ಹೊಸ ಕೋರ್ಸುಗಳ ಪ್ರಾರಂಭ, ಪ್ರವೇಶ ಸಂಖ್ಯೆಯ ಹೆಚ್ಚಳ, ಸಂಯೋಜನೆ ಮುಂದುವರಿಕೆ/ನವೀಕರಣ, ಸ್ಥಳ/ಹೆಸರು ಬದಲಾವಣೆ ಇತ್ಯಾದಿಗಳ ಸಂಯೋಜನೆಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂ. ಇಡಿ 29 ಯುಎನ್ಇ 2021, ದಿನಾಂಕ:12.02.2021 ಹಾಗೂ 16.02.2021ರ ಆದೇಶಗಳ ಜೊತೆಗೆ ಕಾಲೇಜುಗಳ ಜಮೀನಿನ ವಿಸ್ತೀರ್ಣದ ಕುರಿತಂತೆ ಮೇಲ್ಕಂಡ ಮಾನದಂಡಗಳನ್ನು ಯಥಾವತ್ತಾಗಿ ಪಾಲಿಸುವುದು. ಒಂದು ವೇಳೆ ಈ ಮಾನದಂಡಗಳಲ್ಲಿ ವಿಧಿಸಿದ ಜಮೀನಿನ ವಿಸ್ತೀರ್ಣ ಕನಿಷ್ಠ ಮಿತಿಗಿಂತ ಕಡಿಮೆ ಇದ್ದಲ್ಲಿ, ಅಂತಹ ಪ್ರಸ್ತಾವನೆಯನ್ನು ಅನುಮೋದನೆಗೆ ಶಿಫಾರಸ್ಸು ಮಾಡತಕ್ಕದ್ದಲ್ಲ.

(signature) 13/4/2021

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯ-1)

ಗೆ:

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
3. ಕುಲಸಚಿವರು, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
4. ಹಣಕಾಸು ಅಧಿಕಾರಿಗಳು, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.
6. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, (ವಿಶ್ವವಿದ್ಯಾಲಯಗಳು-2), ಬಹುಮಹಡಿಗಳ ಕಟ್ಟಡ, ಬೆಂಗಳೂರು.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಸಂಯೋಜನೆ, ಹೊಸ ಕೋರ್ಸ್ ಪ್ರಾರಂಭ, ಸಂಯೋಜನೆ ಮುಂದುವರಿಕೆ, ಖಾಯಂ ಸಂಯೋಜನೆ ಇತ್ಯಾದಿಗಳ ಬಗ್ಗೆ ಆನ್ ಲೈನ್ ಮುಖಾಂತರ ಪರಿಗಣಿಸುವ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ: ಇಡಿ 34 ಇಜಿಒವಿ 2020 (ಭಾಗ-2), ಬೆಂಗಳೂರು, ದಿನಾಂಕ: 09.06.2021.
2. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು ಇವರ ಪತ್ರ ಸಂಖ್ಯೆ: ಕರಾಉಶಿಪ/ ವಿಸಿಪಿ/ 01/ 2022/ 85, ದಿ: 25.01.2022.

*********

ಪ್ರಸ್ತಾವನೆ:

ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳ ಕಾಲೇಜುಗಳ ಸಂಯೋಜನೆ ಪ್ರಕ್ರಿಯೆ ಕಾರ್ಯಚಟುವಟಿಕೆಗಳಿಗೆ ಅನುಮೋದನೆ ನೀಡುವುದು ಸೇರಿದಂತೆ, ಮುಂಬರುವ ಶೈಕ್ಷಣಿಕ ವರ್ಷಗಳಲ್ಲಿ ಕಡ್ಡಾಯವಾಗಿ, ರಾಷ್ಟ್ರೀಯ ಮಾಹಿತಿ ಸಂಸ್ಥೆ (ಎನ್.ಐ.ಸಿ.) ಮುಖಾಂತರ ಉನ್ನತೀಕರಿಸಿ, ಉನ್ನತ ಶಿಕ್ಷಣ ಇಲಾಖೆಯು ನಿರ್ವಹಣೆ ಮಾಡುತ್ತಿರುವ ಆನ್‌ಲೈನ್ ಸಂಯೋಜನಾ ತಂತ್ರಾಂಶದ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಿ, ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳೊಂದಿಗೆ, ಶಿಫಾರಸ್ಸುಗಳನ್ನು ಸರ್ಕಾರಕ್ಕೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಪ್ರಕರಣ 59 (10) ರನ್ವಯ ಅನುಮೋದನೆಗೆ ಸಲ್ಲಿಸಬೇಕಾಗಿರುತ್ತದೆ.

ಈ ಸಂಬಂಧ 2022-23ನೇ ಶೈಕ್ಷಣಿಕ ಸಾಲಿಗೆ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಆನ್ ಲೈನ್ ಸಂಯೋಜನಾ ತಂತ್ರಾಂಶದಲ್ಲಿ ಅಳವಡಿಸಿ, ಸಂಯೋಜನಾ ಪ್ರಕ್ರಿಯೆಯನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ಅನುಮೋದನೆಗಾಗಿ ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, 2022-23ನೇ ಶೈಕ್ಷಣಿಕ ಸಾಲಿಗೆ ಸಂಬಂಧಿಸಿದಂತೆ, ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಆನ್‌ಲೈನ್ ಸಂಯೋಜನಾ ತಂತ್ರಾಂಶದಲ್ಲಿ ಅಳವಡಿಸಿಕೊಂಡು, ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಕಾಲೇಜುಗಳಿಗೆ ಸಂಯೋಜನಾ ಪ್ರಕ್ರಿಯೆಗಳಾದ Opening New colleges, Extension of existing affiliation, continuation of affiliation, permanent affiliation, change / addition of subject, division of faculty, increase of intake, change of name, closure and withdrawal of a college, local inquiry committee formation and transfer of management ಮುಂತಾದ ಕಾರ್ಯಚಟುವಟಿಕೆಗಳಿಗೆ ಅನುಮೋದನೆ ನೀಡುವುದು ಸೇರಿದಂತೆ, ರಾಷ್ಟ್ರೀಯ ಮಾಹಿತಿ ಸಂಸ್ಥೆ (ಎನ್.ಐ.ಸಿ.) ಮುಖಾಂತರವೇ ಆನ್‌ಲೈನ್ ಸಂಯೋಜನಾ ತಂತ್ರಾಂಶದ ಅರ್ಜಿಗಳನ್ನು ರಾಷ್ಟ್ರೀಯ ಶಿಕ್ಷಣ ನೀತಿ-2020 ಯಂತೆ ಆಹ್ವಾನಿಸಲು ಹಾಗೂ ಭರ್ತಿ ಮಾಡಿರುವ ಅರ್ಜಿಗಳನ್ನು ವಿಶ್ವವಿದ್ಯಾಲಯವು ನೇಮಿಸುವ ಸ್ಥಳೀಯ ವಿಚಾರಣಾ ಸಮಿತಿಯು ಪರಾಮರ್ಶಿಸಿ, ಸಮಿತಿಯ ಶಿಫಾರಸ್ಸನ್ನು ಆನ್‌ಲೈನ್ ಮುಖಾಂತರವೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿ, ವಿಶ್ವವಿದ್ಯಾಲಯವು ತನ್ನ ಶಿಫಾರಸ್ಸಿನೊಂದಿಗೆ ಅಂತಿಮ ಆದೇಶಕ್ಕಾಗಿ ಸರ್ಕಾರಕ್ಕೆ ಸಂಯೋಜನಾ ಪ್ರಸ್ತಾವನೆಯನ್ನು ಸಲ್ಲಿಸಲು ಈ ಕೆಳಕಂಡ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ಇಡಿ 34 ಇಜಿಒವಿ 2020 (ಭಾಗ-2),
ಬೆಂಗಳೂರು, ದಿನಾಂಕ: 26.04.2022

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, 2022-23ನೇ ಶೈಕ್ಷಣಿಕ ಸಾಲಿಗೆ ರಾಷ್ಟ್ರೀಯ ಮಾಹಿತಿ ಸಂಸ್ಥೆ (ಎನ್.ಐ.ಸಿ.) ಮುಖಾಂತರವೇ ಆನ್‌ಲೈನ್ ಸಂಯೋಜನಾ ತಂತ್ರಾಂಶದ ಅರ್ಜಿಗಳನ್ನು ರಾಷ್ಟ್ರೀಯ ಶಿಕ್ಷಣ ನೀತಿ-2020ಯಂತೆ ಆಹ್ವಾನಿಸಲು, ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಕಾಲೇಜುಗಳ ಸಂಯೋಜನಾ ಪ್ರಕ್ರಿಯೆಗಳಾದ Opening New colleges, Extension of existing affiliation, continuation of affiliation, permanent affiliation, change / addition of subject, division of

2....

faculty, increase of intake, change of name, closure and withdrawal of a college, local inquiry committee formation and transfer of management ಸಂಬಂಧಿಸಿದ ವಿವರಗಳನ್ನು ಆನ್‌ಲೈನ್ ಅರ್ಜಿಗಳಲ್ಲಿ ಭರ್ತಿ ಮಾಡಿ, ವಿಶ್ವವಿದ್ಯಾಲಯವು ನೇಮಿಸುವ ಸ್ಥಳೀಯ ವಿಚಾರಣಾ ಸಮಿತಿಯು ಪರಾಮರ್ಶಿಸಿ, ಸಮಿತಿಯ ಶಿಫಾರಸ್ಸನ್ನು ಆನ್‌ಲೈನ್ ಮುಖಾಂತರವೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿ, ನಂತರ ವಿಶ್ವವಿದ್ಯಾಲಯವು ತನ್ನ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಂಯೋಜನಾ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶೀತಲ್ ಎಂ ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿಗಳು
(ವಿಶ್ವವಿದ್ಯಾಲಯ-1),
ಉನ್ನತ ಶಿಕ್ಷಣ ಇಲಾಖೆ

<u>ಪ್ರತಿಯನ್ನು:</u>

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
2. ಉಪಾಧ್ಯಕ್ಷರು, ಕರ್ನಾಟಕ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
3. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
4. ಕುಲಸಚಿವರುಗಳು, ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
5. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
6. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
7. ಗೌರವಾನ್ವಿತ ರಾಜ್ಯಪಾಲರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
8. ಕಾರ್ಯದರ್ಶಿಗಳು, ಮಾನ್ಯ ಉಪಮುಖ್ಯಮಂತ್ರಿಗಳು ಮತ್ತು ಉನ್ನತ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ.
9. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
10. ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
11. ಸರ್ಕಾರದ ಉಪ ಕಾರ್ಯದರ್ಶಿಗಳು (ವಿಶ್ವವಿದ್ಯಾಲಯ), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿಗಳು (ಕಾಲೇಜು), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿಗಳು (ತಾಂತ್ರಿಕ ಶಿಕ್ಷಣ ಮತ್ತು ಯೋಜನೆ), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
14. ವಿಶೇಷಾಧಿಕಾರಿಗಳು, ಇ-ಆಡಳಿತ ಘಟಕ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
15. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಸಂಯೋಜನೆ, ಹೊಸ ಕೋರ್ಸ್ ಪ್ರಾರಂಭ, ಸಂಯೋಜನೆ ಮುಂದುವರಿಕೆ, ಖಾಯಂ ಸಂಯೋಜನೆ ಇತ್ಯಾದಿಗಳ ಬಗ್ಗೆ ಆನ್ ಲೈನ್ ಮುಖಾಂತರ ಕ್ರಮಕೈಗೊಳ್ಳುವ ಬಗ್ಗೆ.

ಓದಲಾಗಿದೆ: 1.ಸರ್ಕಾರದ ಆದೇಶ ಸಂಖ್ಯೆ: ಇಡಿ 39 ಇಜಿಓವಿ 2015, ದಿ: 18-11-2015.
2.ಸರ್ಕಾರದ ಆದೇಶ ಸಂಖ್ಯೆ: ಇಡಿ/34/ಇಜಿಓವಿ/2020 (ಭಾಗ-2), ದಿನಾಂಕ: 22.06.2020.

****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಸಂ (1) ದಿನಾಂಕ: 18.11.2015ರ ಆದೇಶದಲ್ಲಿ 2015-16 ನೇ ಸಾಲಿನಿಂದ, ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಕಾಲೇಜುಗಳಿಗೆ ಸಂಯೋಜನೆಯನ್ನು ರಾಷ್ಟ್ರೀಯ ಮಾಹಿತಿ ಸಂಸ್ಥೆ (ಎನ್.ಐ.ಸಿ) ಯ ಸಹಯೋಗದೊಂದಿಗೆ ಅಭಿವೃದ್ಧಿಪಡಿಸಿರುವ ಆನ್‌ಲೈನ್ ತಂತ್ರಾಂಶದಲ್ಲಿ ಅಳವಡಿಸಿರುವ ಏಕರೂಪ ನಮೂನೆಯಲ್ಲಿಯೇ ಪ್ರಸ್ತಾವನೆಗಳನ್ನು ಪಡೆಯಬೇಕು ಹಾಗೂ ಈ ಸಂಬಂಧ ಆಯಾ ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲಾ ಸಂಯೋಜಿತ ಕಾಲೇಜುಗಳಿಗೆ ಸೂಚಿಸಬೇಕೆಂದು, ಹಾಗೂ ಈ ಸಂಬಂಧ ಎಲ್ಲಾ ವಿಶ್ವವಿದ್ಯಾಲಯಗಳು ತಮ್ಮ login ID & Password ಮೂಲಕ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳಿಗೆ login ID & Password ಸೃಜಿಸಿ, ಆಯಾ ಕಾಲೇಜುಗಳಿಗೆ ಸಂಯೋಜನೆ ಪಡೆಯುವ ಸಲುವಾಗಿ ಆನ್ ಲೈನ್ ಮುಖಾಂತರ ಅರ್ಜಿಗಳನ್ನು ಭರ್ತಿ ಮಾಡುವಂತೆ ಕಾಲೇಜುಗಳಿಗೆ ಸೂಚಿಸಬೇಕೆಂದು ಮತ್ತು ಈ ತಂತ್ರಾಂಶದಲ್ಲಿ ಅಳವಡಿಸಿರುವ ಮಾಹಿತಿಯನ್ನು ವಿಶ್ವವಿದ್ಯಾಲಯ ನೇಮಿಸುವ ಸ್ಥಳೀಯ ವಿಚಾರಣಾ ಸಮಿತಿಯು ಪರಾಮರ್ಶಿಸುವಂತೆ ಹಾಗೂ ಪರಿಶೀಲಿಸಿದ ದಿನದಂದೆ ಸಮಿತಿಯು ತನ್ನ ಶಿಫಾರಸ್ಸನ್ನು ತಂತ್ರಾಂಶದಲ್ಲಿ ಆನ್‌ಲೈನ್ ಮುಖಾಂತರ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ದಿನಾಂಕ: 22.06.2020ರ ಆದೇಶದಲ್ಲಿ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಕಾಲೇಜುಗಳಿಗೆ 2019-20 ನೇ ಸಾಲಿನಲ್ಲಿ ಸಂಯೋಜನಾ ಪ್ರಕ್ರಿಯೆ ಕೈಗೊಂಡು 2020-21 ನೇ ಸಾಲಿನ Opening New Colleges, Extension of existing Affiliation, Continuation of Affiliation, Permanent Affiliation, Change /Addition of Subject, Division of Faculty, Increase of intake, Change of name, Closure & withdrawal of a College, Local Inquiry

Committee formation and Transfer of Management ಮುಂತಾದ ಕಾರ್ಯ ಚಟುವಟಿಕೆಗಳಿಗೆ ಅನುಮೋದನೆ ನೀಡುವಾಗ ಕಡ್ಡಾಯವಾಗಿ ರಾಷ್ಟ್ರೀಯ ಮಾಹಿತಿ ಸಂಸ್ಥೆ (ಎನ್.ಐ.ಸಿ) ಮುಖಾಂತರ ಉನ್ನತೀಕರಿಸಿರುವ ಆನ್‌ಲೈನ್ ತಂತ್ರಾಂಶದ ಮುಖಾಂತರವೇ ಅರ್ಜಿಗಳನ್ನು ಆಹ್ವಾನಿಸಲು ಹಾಗೂ ಭರ್ತಿ ಮಾಡಿರುವ ಅರ್ಜಿಗಳನ್ನು ಅಳವಡಿಸಿರುವ ಮಾಹಿತಿಗಳನ್ನು ವಿಶ್ವವಿದ್ಯಾಲಯವು ನೇಮಿಸುವ ಸ್ಥಳೀಯ ವಿಚಾರಣಾ ಸಮಿತಿಯು ಪರಾಮರ್ಶಿಸಿ, ಶಿಫಾರಸ್ಸನ್ನು ಆನ್‌ಲೈನ್ ಮುಖಾಂತರವೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸುವಂತೆ ಆದೇಶಿಸಲಾಗಿತ್ತು.

ಆದರೆ, ಸಂಯೋಜನಾ ಪ್ರಕ್ರಿಯೆಯಲ್ಲಿ Opening New Colleges, Extension of existing Affiliation, Continuation of Affiliation, Permanent Affiliation, Change /Addition of Subject, Division of Faculty, Increase of intake, Change of name, Closure & withdrawal of a College, Local Inquiry Committee formation and Transfer of Management ಮುಂತಾದ ಕಾರ್ಯ ಚಟುವಟಿಕೆಗಳಿಗೆ ಅನುಮೋದನೆ ನೀಡುವಾಗ, ಕಡ್ಡಾಯವಾಗಿ ರಾಷ್ಟ್ರೀಯ ಮಾಹಿತಿ ಸಂಸ್ಥೆ (ಎನ್.ಐ.ಸಿ) ಮುಖಾಂತರ ಉನ್ನತೀಕರಿಸಿರುವ ಆನ್‌ಲೈನ್ ತಂತ್ರಾಂಶದ ಮುಖಾಂತರವೇ ಅರ್ಜಿಗಳನ್ನು ಆಹ್ವಾನಿಸಲು ಹಾಗೂ ಭರ್ತಿ ಮಾಡಿರುವ ಅರ್ಜಿಗಳನ್ನು ಅಳವಡಿಸುವ ಸಂಬಂಧದಲ್ಲಿ ಕೆಲವು ತೊಡಕುಗಳು ಇರುವುದನ್ನು ವಿವಿಧ ವಿಶ್ವವಿದ್ಯಾಲಯಗಳ ಕುಲಪತಿಗಳು ಸರ್ಕಾರದ ಗಮನಕ್ಕೆ ತಂದು, ಇದರಲ್ಲಿ ಕೆಲವು ಮಾರ್ಪಾಡುಗಳನ್ನು ಮಾಡುವಂತೆ ನೀಡಿದ ಸಲಹೆ ಅನುಸಾರವಾಗಿ ಪರಿಶೀಲಿಸಿ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 29 ಯುಎನ್ಇ 2021, ಬೆಂಗಳೂರು,**

**ದಿನಾಂಕ: 12.02.2021.**

ಮೇಲ್ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2020-21 ಮತ್ತು 2021-22ನೇ ಸಾಲುಗಳಿಗೆ Opening New Colleges, Extension of existing Affiliation, Continuation of Affiliation, Permanent Affiliation, Change /Addition of Subject, Division of Faculty, Increase of intake, Change of name, Closure & withdrawal of a College, Local Inquiry Committee formation and Transfer of Management ವಿವಿಧ ರೀತಿಯ ಸಂಯೋಜನೆ ಪ್ರಸ್ತಾವನೆಯನ್ನು ಆನ್‌ಲೈನ್ ಮೂಲಕ ಸಲ್ಲಿಸುವಾಗ, ಈ ಕೆಳಕಂಡಂತೆ ಮಾರ್ಗಸೂಚಿಗಳನ್ನು ಪಾಲಿಸುವಂತೆ ಆದೇಶಿಸಿದೆ.

4. 2020-21ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸುವ ಕಾಲೇಜುಗಳ ಸಂಯೋಜನೆಗೆ ಶಿಫಾರಸ್ಸು ಮಾಡುವಾಗ ಸಂಯೋಜನಾ ಅಂಕಗಳಲ್ಲಿ (Affiliation Marks) ಕನಿಷ್ಠ 40 ಅಂಕಗಳನ್ನು ಪಡೆದಿರುವುದನ್ನು ಖಚಿತಪಡಿಸಿಕೊಳ್ಳುವುದು ಮತ್ತು ನಿಗದಿತ ಮಾನದಂಡಗಳನ್ನು (Defined Parameters) ಪೂರೈಸತಕ್ಕದ್ದು.

5. 2021-22ರ ಸಂಯೋಜನೆಗೆ ಸಂಬಂಧಪಟ್ಟಂತೆ, ಈ ಕೆಳಗಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ವಿಶ್ವವಿದ್ಯಾಲಯಗಳು ಸಂಯೋಜನಾ ಪ್ರಕ್ರಿಯೆಯನ್ನು ನಡೆಸಿ, ಶಿಫಾರಸ್ಸುಗಳನ್ನು ಆನ್‌ಲೈನ್ ಮುಖಾಂತರ ಸರ್ಕಾರಕ್ಕೆ ಕಳುಹಿಸುವುದು.

6. ಈ ವಿಚಾರದಲ್ಲಿ ಒಂದು ಬಾರಿಯ ಕ್ರಮವಾಗಿ ಸಂಯೋಜನಾ ಅಂಕ (Affiliation Score) ಗಳಲ್ಲಿ ಶೇ.5 ರಷ್ಟು ಅಂಕಗಳ ರಿಯಾಯಿತಿ ನೀಡಿ, ಮೇಲಿನ 2ನೇ ಕಂಡಿಕೆಯ ಪಟ್ಟಿಯಲ್ಲಿ ನೀಡಿರುವಂತೆ ಸಂಯೋಜನಾ ಅಂಕಗಳ ಆಧಾರದ ಮೇಲೆ ಶಿಫಾರಸ್ಸು ಮಾಡುವುದು.

7. ಈ ಹಿಂದಿನ ವರ್ಷಗಳಲ್ಲಿ ಸಂಯೋಜನೆಯಾಗಿರುವ ಕಾಲೇಜುಗಳು, ಪ್ರಸಕ್ತ ಸಾಲಿನಲ್ಲಿ Defined Parameters ನ 8 ಅಂಶಗಳನ್ನು ಪೂರ್ಣಗೊಳಿಸದೆ ಇದ್ದರೆ, ಮುಂದಿನ 2 ವರ್ಷಗಳಲ್ಲಿ Defined Parameters ಗಳನ್ನು ಪೂರ್ಣಗೊಳಿಸುವ ನಿಬಂಧನೆಗೆ ಒಳಪಡಿಸಿ ಸಂಯೋಜನೆಯನ್ನು ನೀಡಬಹುದು ಹಾಗೂ ಸದರಿ ಕಾಲೇಜುಗಳಿಗೆ ಯಾವುದೇ ಹೊಸ ಕೋರ್ಸ್ / ಕಾಂಬಿನೇಷನ್ ಅನ್ನು ನೀಡತಕ್ಕದ್ದಲ್ಲ.

8. ಸಂಯೋಜನ ಪಡೆದ ಕಾಲೇಜುಗಳು ಎರಡು ವರ್ಷದ ನಂತರ ಕನಿಷ್ಠ 40 ಸಂಯೋಜನಾ ಅಂಕಗಳನ್ನು ಗಳಿಸದಿದ್ದಲ್ಲಿ ಮತ್ತು ಭೂಮಿಯೂ ಸೇರಿದಂತೆ Defined Parameters ಗಳನ್ನು ಪೂರ್ಣಗೊಳಿಸದ ಪಕ್ಷದಲ್ಲಿ, ಪ್ರಥಮ ವರ್ಷದ ಪದವಿಗಳಿಗೆ ಪ್ರವೇಶಾತಿಯನ್ನು ನಿಷಿದ್ಧಗೊಳಿಸುವುದು. ಅಂತಹ ಸಂದರ್ಭಗಳಲ್ಲಿ ದ್ವಿತೀಯ ಮತ್ತು ತೃತೀಯ ಪದವಿ ವಿದ್ಯಾರ್ಥಿಗಳು, ತಮ್ಮ ಅಂತಿಮ ಪದವಿ ತರಗತಿಗಳನ್ನು ಪೂರ್ಣಗೊಳಿಸುವವರೆಗೆ ಮಾತ್ರ ಆ ಕಾಲೇಜುಗಳನ್ನು ನಡೆಸಲು ಅವಕಾಶ ಕಲ್ಪಿಸುವುದು. ನಂತರ ಆ ಕಾಲೇಜುಗಳ ಸಂಯೋಜನೆಯನ್ನು ರದ್ದುಪಡಿಸುವುದು.

-5...

1. 2020–21ನೇ ಸಾಲಿಗೆ ಈಗ ಇರುವ ಕೋರ್ಸ್ ಗಳು ಮತ್ತು ವಿದ್ಯಾರ್ಥಿ ಸಂಖ್ಯೆಗಳಿಗೆ ಮಾತ್ರ ಅನ್ವಯಿಸುವಂತೆ ಎಲ್ಲಾ ಸಂಯೋಜನೆಯನ್ನು ನವೀಕರಿಸಲು, ಮುಂದುರಿಸಲು ಮತ್ತು ವಿಸ್ತರಿಸಲು ವಿಶ್ವವಿದ್ಯಾಲಯಗಳು ತಮ್ಮ ಹಂತದಲ್ಲಿಯೇ ನಿಯಾಮಾನುಸಾರ ಕ್ರಮ ಕೈಗೊಳ್ಳುವುದು.

2. 2020–21ನೇ ಸಾಲಿಗೆ, ವಿದ್ಯಾರ್ಥಿ ಸಂಖ್ಯೆಯನ್ನು ಹೆಚ್ಚಿಸುವ ಬಗ್ಗೆ, ಹೊಸ ಕಾಂಬಿನೇಷನ್ ಗಳನ್ನು ನೀಡುವ ಬಗ್ಗೆ ಮತ್ತು ಹೊಸ ಕೋರ್ಸ್ ಗಳನ್ನು ಪ್ರಾರಂಭಿಸುವ ಬಗ್ಗೆ ವಿಶ್ವವಿದ್ಯಾಲಯಗಳು ನಿಯಮಾನುಸಾರ ತಮ್ಮ ಅಭಿಪ್ರಾಯಗಳೊಂದಿಗೆ ಕೂಡಲೇ ಸರ್ಕಾರಕ್ಕೆ ಸ್ಪಷ್ಟವಾದ ಶಿಫಾರಸ್ಸುಗಳನ್ನು ಕಳಿಸುವುದು. ಹಾಗೆ ಶಿಫಾರಸ್ಸು ಮಾಡುವಾಗ ಒಂದು ಬಾರಿಯ ಕ್ರಮವಾಗಿ Affiliation Score ಗಳಲ್ಲಿ ಶೇ. 5 ರಷ್ಟು ರಿಯಾಯಿತಿ ನೀಡುವುದು. ಮತ್ತು ಸಂಯೋಜನೆ ಅಂಕಗಳ ಆಧಾರದ ಮೇಲೆ ಕೆಳಕಂಡಂತೆ ಮಾನದಂಡಗಳನ್ನು ನಿಗಧಿಗೊಳಿಸುವುದು.

| ಕ್ರಮ ಸಂಖ್ಯೆ | ನಿಗಧಿಪಡಿಸಬಹುದಾದ ಸಂಯೋಜನೆಯ ರೀತಿ | ಅವಶ್ಯವಿರುವ ಕನಿಷ್ಠ ಸಂಯೋಜನಾ ಶೇಕಡ ಅಂಕಗಳು (%) (ರಿಯಾಯಿತಿ ನಂತರ) |
|---|---|---|
| 01 | ಹೊಸ ಸಂಯೋಜನೆಗಳು | 35 |
| 02 | ಸಂಯೋಜನೆಗಳ ನವೀಕರಣ/ ಮುಂದುವರಿಕೆ/ ವಿಸ್ತರಣೆ | 40 |
| 03 | ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಳ | 45 |
| 04 | ಹೊಸ ಕೋರ್ಸ್‌ಗಳ /ಹೊಸ ಕಾಂಬಿನೇಷನ್‌ಗಳ ಮಂಜೂರಾತಿ | 50 |
| 05 | ಹೊಸ ಶಾಶ್ವತ ಸಂಯೋಜನೆಗಳು | 55 |
| 06 | ಶಾಶ್ವತ ಸಂಯೋಜನೆಗಳ ನವೀಕರಣ | 65 |

3. A Library area per student ಮತ್ತು Laboratory area per student ಗಳಲ್ಲಿ 50% ರಿಯಾಯ್ತಿ ನೀಡಬಹುದಾಗಿದೆ.

9. ಎಲ್ಲಾ ವಿದ್ಯಾರ್ಥಿಗಳೂ ಏಕಕಾಲದಲ್ಲಿ ಗ್ರಂಥಾಲಯದಲ್ಲಿ ಇರುವುದಿಲ್ಲವಾದ ಕಾರಣ ಮತ್ತುವಿದ್ಯಾರ್ಥಿಗಳು ಪ್ರಯೋಗಾಲಯಗಳನ್ನು ತಂಡಗಳಲ್ಲಿ ಉಪಯೋಗಿಸುವುದರಿಂದ, ಗ್ರಂಥಾಲಯಗಳಿಗೆ ಮತ್ತು ಪ್ರಯೋಗಾಲಯಗಳಿಗೆ ನಿಗಧಿಪಡಿಸಿದ ಸ್ಥಳಗಳ ವಿಸ್ತೀರ್ಣಗಳಲ್ಲಿ 50% ರಿಯಾಯಿತಿ ನೀಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶೀತಲ್.ಎಂ.ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು–I)

ಪ್ರತಿಯನ್ನು:–

1) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3) ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
4) ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
5) ಕುಲಸಚಿವರು, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
6) ಹಣಕಾಸು ಅಧಿಕಾರಿ, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:–

1) ಉಪಮುಖ್ಯಮಂತ್ರಿಗಳು, ಉನ್ನತ ಶಿಕ್ಷಣ ಇಲಾಖೆರವರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.

ಕರ್ನಾಟಕ ಸರ್ಕಾರ

ಸಂಖ್ಯೆ:ಇಡಿ 29 ಯುಏವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:16.02.2021

**ತಿದ್ದುಪಡಿ**

ಸರ್ಕಾರದ ಆದೇಶ ಸಂಖ್ಯೆ:ಇಡಿ 29 ಯುಏವಿ 2021, ದಿನಾಂಕ:12.02.2021 ರ ಆದೇಶ ಭಾಗದ ಕ್ರಮ ಸಂಖ್ಯೆ:4 ರಲ್ಲಿನ 2 ನೇ ಸಾಲಿನಲ್ಲಿರುವ "ಸಂಯೋಜನಾ ಅಂಕಗಳಲ್ಲಿ (Affiliation Marks) ಕನಿಷ್ಠ 40 ಅಂಕಗಳನ್ನು" ಎಂಬುದರ ಬದಲಾಗಿ "ಸಂಯೋಜನಾ ಅಂಕಗಳಲ್ಲಿ (Affiliation Marks) ಕನಿಷ್ಠ 35 ಅಂಕಗಳನ್ನು" ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶೀತಲ್.ಎಂ.ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1)

ಪ್ರತಿಯನ್ನು:-

1) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3) ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
4) ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
5) ಕುಲಸಚಿವರು, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
6) ಹಣಕಾಸು ಅಧಿಕಾರಿ, ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:-

1) ಉಪಮುಖ್ಯಮಂತ್ರಿಗಳು, ಉನ್ನತ ಶಿಕ್ಷಣ ಇಲಾಖೆರವರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.